# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

## ನೂತನ ವ್ಯಾಖ್ಯಾನಿತ ಅಂಶದಾಯಿ ಕೊಡುಗೆ ಪಿಂಚಣಿ ಯೋಜನೆ ಘಟಕ.

ಕವಿಪ್ರನಿನಿ/ಬಿ. B93/ 35989/ 2017-18/ Cys-4 ನಿಗಮ ಕಾರ್ಯಾಲಯ, ಕಾವೇರಿ ಭವನ, ಬೆಂಗಳೂರು. ದಿನಾಂಕ: 05-05-2017

## ಸುತ್ತೋಲೆ

ವಿಷಯ NDCPS ವಂತಿಗೆ ವಿವರಗಳನ್ನು ನಂತರದ ತಿಂಗಳ 5ನೇ ದಿನಾಂಕದೊಳಗೆ ತಂತ್ರಾಂಶದಲ್ಲಿ ದಾಖಲಿಸುವ ಬಗ್ಗೆ.

ಉಲ್ಲೇಖ ಈ ಕಛೇರಿ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ//ಬಿ. B93/ 35989/ 2016-17 / ಸಿವೈಎಸ್-3 ದಿನಾಂಕ 28-4-2017.

*****

ಉಲ್ಲೇಖದಲ್ಲಿರುವ ಈ ಕಛೇರಿ ಸುತ್ತೋಲೆಯಲ್ಲಿ ಕವಿಪ್ರನಿನಿ ಮತ್ತು ಎಲ್ಲಾ ವಿಸಕಂಗಳ ಲೆಕ್ಕ ಘಟಕಗಳು ಏಪ್ರಿಲ್ 2017 ರ New Defined Contributory Pension Scheme (NDCPS) ಯೋಜನೆಯ ಪಿಂಚಣಿ ವಂತಿಗೆ ವಿವರಗಳನ್ನು ಮೇ 2017 ರ 5ನೇ ದಿನಾಂಕದೊಳಗೆ ತಂತ್ರಾಂಶದಲ್ಲಿ ದಾಖಲಿಸುವಂತೆ ಸೂಚಿಸಲಾಗಿತ್ತು. ಆದರೆ, ಕವಿಪ್ರನಿನಿಯ ಗಣಕ ಯಂತ್ರ ಶಾಖೆಯಲ್ಲಿ ಕೆಲವು ತಾಂತ್ರಿಕ ಕಾರಣಗಳಿಂದ ಲೆಕ್ಕ ಘಟಕಗಳಿಗೆ ತಂತ್ರಾಂಶದಲ್ಲಿ ದಾಖಲಿಸಲು ತೊಂದರೆಯಾಗುತ್ತಿದೆ. ಈ ಹಿನ್ನಲೆಯಲ್ಲಿ ಏಪ್ರಿಲ್ 2017 ರ ಪಿಂಚಣಿ ವಂತಿಗೆ ವಿವರಗಳನ್ನು ತಂತ್ರಾಂಶದಲ್ಲಿ ದಾಖಲಿಸಲು ಲೆಕ್ಕ ಘಟಕಗಳಿಗೆ ಕೆಲವು ದಿನಗಳ ಹೆಚ್ಚುವರಿ ಅವಕಾಶವನ್ನು ನೀಡಲಾಗಿದೆ. ಆದಾಗ್ಯೂ, ಲೆಕ್ಕ ಘಟಕಗಳು ಆದ್ಯತೆಯ ಮೇಲೆ ಆದಷ್ಟು ಶೀಘ್ರವಾಗಿ ಸದರಿ ಕಾರ್ಯವನ್ನು ಪೂರ್ಣಗೊಳಿಸುವಂತೆ ಸೂಚಿಸಲಾಗಿದೆ.

ಲೆಕ್ಕ ಘಟಕಗಳು ತಂತ್ರಾಂಶದಲ್ಲಿ ದಾಖಲಿಸುವ ಕಾರ್ಯವನ್ನು ಮೇ 2017 ರಿಂದ ಪ್ರಾರಂಭಿಸಿ ಪಿಂಚಣಿ ವಂತಿಗೆ ವಿವರಗಳನ್ನು ತಂತ್ರಾಂಶದಲ್ಲಿ ದಾಖಲಿಸುವ ಅವಕಾಶವನ್ನು **ನಂತರದ ತಿಂಗಳ 5ನೇ ದಿನಾಂಕದವರೆಗೂ ಮುಕ್ತವಾಗಿರಿಸಿದ್ದು, ಆ ನಂತರ ಅವಕಾಶವನ್ನು ರದ್ದುಗೊಳಿಸಲಾಗುವುದು**. ಆದ್ದರಿಂದ ಮೇ 2017ರ ಪಿಂಚಣಿ ವಂತಿಗೆಯ ವಿವರಗಳನ್ನು ಜೂನ್ 2017 ರ 5ನೇ ದಿನಾಂಕದೊಳಗೆ ತಂತ್ರಾಂಶದಲ್ಲಿ ದಾಖಲಿಸಲು ಲೆಕ್ಕ ಘಟಕಗಳು ಕ್ರಮ

ವಹಿಸುವಂತೆ ಸೂಚಿಸಲಾಗಿದೆ. ದಿನಾಂಕ 28-04-2017 ರ ಸುತ್ತೋಲೆಯ ಇತರ ಷರತ್ತುಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಎಲ್ಲಾ ಕಂಪನಿಗಳ ಆರ್ಥಿಕ ಸಲಹೆಗಾರರು, ನಿಯಂತ್ರಣಾಧಿಕಾರಿಗಳು ಮತ್ತು ಉಪ ನಿಯಂತ್ರಣಾಧಿಕಾರಿಗಳು ತಮ್ಮ ವ್ಯಾಪ್ತಿಯ ಲೆಕ್ಕ ಘಟಕಗಳು ನಿಗಧಿತ ಅವಧಿಯೊಳಗೆ ಪಿಂಚಣಿ ವಂತಿಗೆ ವಿವರಗಳನ್ನು ತಂತ್ರಾಂಶದಲ್ಲಿ ದಾಖಲಿಸುವುದನ್ನು ಖಚಿತ ಪಡಿಸಿಕೊಳ್ಳುವಂತೆ ಮತ್ತೊಮ್ಮೆ ಕೋರಲಾಗಿದೆ.

ಆರ್ಥಿಕ ಸಲಹೆಗಾರರು
(ಪಿ ಮತ್ತು ಉ ಟ್ರಸ್ಟ್)

ಪ್ರತಿಗಳು:

೧. ವ್ಯವಸ್ಥಾಪಕ ನಿರ್ದೇಶಕರು, ಎಲ್ಲಾ ವಿಸಕಂಗಳು,
೨. ಆರ್ಥಿಕ ಸಲಹೆಗಾರರು, ಕವಿಪ್ರನಿನಿ / ಎಲ್ಲಾ ವಿಸಕಂಗಳು,
೩. ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ರವರ ಆಪ್ತ ಕಾರ್ಯದರ್ಶಿ ರವರಿಗೆ, ವ್ಯವಸ್ಥಾಪಕ ನಿರ್ದೇಶಕರ ಗಮನಕ್ಕೆ ತರುವಂತೆ ಕೋರಲಾಗಿದೆ.
೪. ವ್ಯವಸ್ಥಾಪಕ ನಿರ್ದೇಶಕರು, ಪಿ.ಸಿ.ಕೆ.ಎಲ್ ರವರ ಆಪ್ತ ಕಾರ್ಯದರ್ಶಿ ರವರಿಗೆ, ವ್ಯವಸ್ಥಾಪಕ ನಿರ್ದೇಶಕರ ಗಮನಕ್ಕೆ ತರುವಂತೆ ಕೋರಲಾಗಿದೆ.
೫. ನಿರ್ದೇಶಕರು (ಹಣಕಾಸು), ನಿರ್ದೇಶಕರು (ಆ ಮತ್ತು ಮಾ.ಸಂ), ಕವಿಪ್ರನಿನಿ ರವರ ಆಪ್ತ ಕಾರ್ಯದರ್ಶಿ ರವರಿಗೆ, ನಿರ್ದೇಶಕರ ಗಮನಕ್ಕೆ ತರುವಂತೆ ಕೋರಲಾಗಿದೆ.
೬. **ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ** **http:/www.kptcl.com / eprasarana** ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಅ.ಅ (ಐ.ಟಿ ಮತ್ತು ಎಂ ಐ ಎಸ್) ರವರು ವೆಬ್ ಸೈಟ್ ನಲ್ಲಿ ಪ್ರಕಟಿಸಲು ವ್ಯವಸ್ಥೆ ಮಾಡುವಂತೆ ಕೋರಲಾಗಿದೆ.
೭. ಎಲ್ಲಾ ಮುಖ್ಯ ಇಂಜಿನಿಯರ್ ಕವಿಪ್ರನಿನಿ / ಎಸ್ಕಾಂಗಳು
೮. ಎಲ್ಲಾ ಅಧೀಕ್ಷಕ ಇಂಜಿನಿಯರ್ / ನಿಯಂತ್ರಣಾಧಿಕಾರಿ ಕವಿಪ್ರನಿನಿ / ಎಸ್ಕಾಂಗಳು
೯. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ / ಉಪ ನಿಯಂತ್ರಣಾಧಿಕಾರಿ ಕವಿಪ್ರನಿನಿ / ಎಸ್ಕಾಂಗಳು
೧೦. ಎಲ್ಲಾ ಲೆಕ್ಕಾಧಿಕಾರಿಗಳು ಕವಿಪ್ರನಿನಿ / ಎಸ್ಕಾಂಗಳು
೧೧. ಎಲ್ಲಾ ಲೆಕ್ಕಾಧಿಕಾರಿಗಳು (ಆಂತರಿಕ ತನಿಖೆ) ಕವಿಪ್ರನಿನಿ / ಎಸ್ಕಾಂಗಳು